ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

27

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ        ದಿನಾಂಕ : DATE 9/9/2020

# ಕೋವಿಡ್ ರೋಗಿಗಳಿಗಾಗಿ ಏರ್ ಆ್ಯಂಬುಲೆನ್ಸ್ ಆರಂಭ

## ಖಾಸಗಿ ಸಂಸ್ಥೆಯ ಸೇವೆಗೆ ಬೆಂಗಳೂರಿನಲ್ಲಿ ಸಿಎಂ ಚಾಲನೆ



ಮಂಗಳವಾರ ಬೆಂಗಳೂರಲ್ಲಿ ಏರ್ ಆ್ಯಂಬುಲೆನ್ಸ್ ಸೇವೆಗೆ ಚಾಲನೆ ನೀಡಿದ ಸಿಎಂ ಯಡಿಯೂರಪ್ಪ.

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೋವಿಡ್ ರೋಗಿಗಳು ಸೇರಿದಂತೆ ತುರ್ತು ಸಂದರ್ಭದಲ್ಲಿ ಒಂದು ಕಡೆಯಿಂದ ಮತ್ತೊಂದು ಕಡೆಗೆ ಅತ್ಯುತ್ತಮ ಆಸ್ಪತ್ರೆಗಳಿಗೆ ದಾಖಲು ಮಾಡುವ ಉದ್ದೇಶದಿಂದ ಖಾಸಗಿ ಸಂಸ್ಥೆ ಆರಂಭಿಸಿರುವ ಅತ್ಯಾಧುನಿಕ ಸೌಲಭ್ಯ ಇರುವ ಏರ್ ಆ್ಯಂಬುಲೆನ್ಸ್ ಸೇವೆಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಚಾಲನೆ ನೀಡಿದರು.

ಮಂಗಳವಾರ ಯಲಹಂಕದ ಜಕ್ಕೂರು ಏರೋಡ್ರಮ್‌ನಲ್ಲಿ ದೇಶದ ಮೊದಲ ಸಂಯೋಜಿತ ಏರ್ ಆ್ಯಂಬುಲೆನ್ಸ್ ಸೇವೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕೋವಿಡ್-19 ರೋಗಿಗಳ ಚಿಕಿತ್ಸೆಗೆ ಅನುಕೂಲವಾಗುವಂತೆ ಸ್ಥಿರ ವಿಂಗ್ ವಿಮಾನಗಳು, ಹೆಲಿಕಾಪ್ಟರ್ ಮತ್ತು ಲ್ಯಾಂಡ್ ಆ್ಯಂಬುಲೆನ್ಸ್ ಸೇವೆಗಳನ್ನು ಒಳಗೊಂಡ ಏರ್ ಆ್ಯಂಬುಲೆನ್ಸ್ ಸೇವೆ ಬಳಸಿಕೊಳ್ಳಬಹುದು ಎಂದರು.

ಅಲ್ಲದೆ, ದೇಶದಲ್ಲಿ ರಾಜ್ಯ ಆರೋಗ್ಯ ನೀತಿ ಜಾರಿಗೆ ತಂದ ಮೊದಲ ರಾಜ್ಯ ಕರ್ನಾಟಕ. ಏರ್ ಆ್ಯಂಬುಲೆನ್ಸ್ ಸೇವೆ ಕೂಡ ಸರ್ಕಾರ ಬೆಂಬಲಿತ ಆರೋಗ್ಯ ಯೋಜನೆಯಾಗಿದೆ ಎಂದು ತಿಳಿಸಿದರು.

ಏರ್ ಆ್ಯಂಬುಲೆನ್ಸ್ ಸೇವೆಯು ಹೊರ ವಲಯದಲ್ಲಿರುವ ಆರೋಗ್ಯ ಕೇಂದ್ರಗಳಿಂದ ನಗರದ ಕೇಂದ್ರಗಳಿಗೆ ಸಂಪರ್ಕ ಕಲ್ಪಿಸಲು ಸಹಕಾರಿಯಾಗಲಿವೆ. ಇದರಿಂದ ಶೀಘ್ರ ಆರೋಗ್ಯ ಸೇವೆಯೊಂದಿಗೆ ರೋಗಿಗೆ ತುರ್ತು ಚಿಕಿತ್ಸೆ ದೊರಕಿಸಲು ನೆರವಾಗಲಿವೆ. ಜರ್ಮನಿಯಿಂದ ಆಮದು ಮಾಡಿಕೊಂಡಿರುವ ಕೋವಿಡ್ ಐಸೋಲೇಷನ್ ಪ್ಯಾಡ್ ಅನ್ನು ಕೋವಿಡ್ ರೋಗಿಗಳ ಸುರಕ್ಷಿತ ಸ್ಥಳಾಂತರಕ್ಕೆ ಸಹಕಾರಿಯಾಗಿದೆ.